ಇಂದು ದಿನಾಂಕಃ 28.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಪಾಟೀ ಸವಾಲುಃ** ವಾದಿಯ ಪರ ಶ್ರೀ ಎಸ್ ಆರ್ ಎ ವಕೀಲರಿಂದಃ

ನನ್ನ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಲು ಮಾಹಿತಿಯನ್ನು ನಾನೇ ನೀಡಿರುತ್ತೇನೆ. ನನ್ನ ತಾಯಿಗೆ 3 ಜನ ಮಕ್ಕಳು ಅವರೆಂದರೆ ನಾನು, ಪ್ರತಿವಾದಿ 6 ಮತ್ತು 7 ಹಾಗೂ ವಾದಿ 1(ಎ) ಆಗಿರುತ್ತಾರೆ. ನನ್ನ ತಾಯಿ ಜೀವಂತವಾಗಿರುವಾಗಲೇ ದಾವಾ ಆಸ್ತಿಗಳು ಹಾಗೂ ಇತರೆ ಆಸ್ತಿಗಳನ್ನು ನನಗೆ ಮತ್ತು ನನ್ನ ತಂಗಿಯರಿಗೆ ಹಾಗೂ ನನ್ನ ತಮ್ಮನಿಗೆ ಹಂಚಿಕೆ ಮಾಡಿರುತ್ತಾರೆ ಎಂದರೆ ಸಾಕ್ಷಿಯು ನಾನು ಯಾವುದೇ ಆಸ್ತಿಯನ್ನು ತೆಗೆದುಕೊಂಡಿಲ್ಲ ಎಂದು ನುಡಿದಿರುತ್ತಾರೆ. ಹಿರೇಬೂದಿಹಾಳ ಗ್ರಾಮದ 3 ಎಕರೆ ಜಮೀನು ನನ್ನ ಹಿಸ್ಸೆಗೆ ಬಂದಿರುತ್ತದೆ ಎಂದರೆ ಸಾಕ್ಷಿ ನಾನು ನನ್ನ ತಂದೆಯಿಂದ ಖರೀದಿಯನ್ನು ಮಾಡಿರುತ್ತೇನೆ ಎಂದು ನುಡಿದಿರುತ್ತಾರೆ. ಪ್ರತಿವಾದಿ 7 ರವರಿಗೆ ತನ್ನ ಮದುವೆಯ ಸಮಯದಲ್ಲಿ ಬಂಗಾರ ಮತ್ತು ಹಣವನ್ನು ಹಿಸ್ಸೆ ರೂಪದಲ್ಲಿ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ನನ್ನ ತಮ್ಮನಿಗೆ ದಾವಾ ಆಸ್ತಿಯನ್ನು ಹಾಗೂ ಇತರೆ ಆಸ್ತಿಗಳನ್ನು ನೀಡಿದ್ದರು ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಈಗಲೂ ನನ್ನ ತಮ್ಮ ವಹಿವಾಟು ಮಾಡುತ್ತಿದ್ದಾರೆ ಎಂದರೆ ಸಾಕ್ಷಿಯು ದಾವಾ ಆಸ್ತಿ ನಮ್ಮ ತಾಯಿ ಆಸ್ತಿ ಆಗಿದ್ದು, ಅದರಲ್ಲಿ ನಮಗೆ ಪಾಲು ಬೇಕು ಎಂದು ನುಡಿದಿರುತ್ತಾರೆ. ನಾನು ನ್ಯಾಯಾಲಯಕ್ಕೆ ತಪ್ಪು ಮಾಹಿತಿ ನೀಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಪ್ರತಿವಾದಿ 1 ರಿಂದ 5 ರವರ ಪರ ವಕೀಲರು ಕಾಲವಕಾಶವನ್ನು ಕೋರಿದ್ದು ಅದರಂತೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.